ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

B.M.R.C.L..ನಲ್ಲಿ ಗುತ್ತಿಗೆ ನೌಕರರ ನೇಮಕಾತಿ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

67 (450) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಬೆಂಗಳೂರು ಮೆಟ್ರೋ ರೈಲು ನಿಗಮ (B.M.R.C.L.)ದಲ್ಲಿ ಹಾಲಿ ಗುತ್ತಿಗೆಯಡಿ ಕೆಲಸ ನಿರ್ವಹಿಸುತ್ತಿರುವ ಉದ್ಯೋಗಿಗಳು ಎಷ್ಟು; (ಉದ್ಯೋಗಿ ಹೆಸರು, ಹುದ್ದೆ, ಮಾಸಿಕ ಪಡೆಯುತ್ತಿರುವ ವೇತನ ಸೇವೆಗೆ ಸೇರಿದ ದಿನಾಂಕದೊಂದಿಗೆ ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ನೌಕರರಲ್ಲಿ ಕರ್ನಾಟಕದವರೆಷ್ಟು ; ಬೇರೆ ರಾಜ್ಯದವರೆಷ್ಟು; (ಹೆಸರು ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಇ) ಮೆಟ್ರೋ ನಿಗಮಕ್ಕೆ ಸಾವಿರಾರು ಗುತ್ತಿಗೆ ನೌಕರರನ್ನು ಯಾವ ಮಾನದಂಡದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ ; ದಿನಪತ್ರಿಕೆಯಲ್ಲಿ ಜಾಹೀರಾತು ನೀಡಿ ನೇಮಕ ಮಾಡಿಕೊಳ್ಳಲಾಗಿದೆಯೇ ; (ವಿವರ ನೀಡುವುದು)

(ಈ) ಜನಪ್ರತಿನಿಧಿಗಳು ಶಿಫಾರಸ್ಸು ಮಾಡಿದ ಯಾವ ಅಭ್ಯರ್ಥಿಗಳಿಗೂ ಕೆಲಸ ನೀಡದೆ ಅಧಿಕಾರಿಗಳು ತಮ್ಮ ಮನಸ್ಸಿಗೆ ಬಂದಂತೆ ಗುತ್ತಿಗೆ ನೌಕರರನ್ನು ನೇಮಕಾತಿ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ನೇಮಕಗೊಂಡ ಗುತ್ತಿಗೆ ನೌಕರರಲ್ಲಿ ಜನಪ್ರತಿನಿಧಿಗಳು ಶಿಫಾರಸ್ಸು ಮಾಡಿದವರೆಷ್ಟು ; ಅಧಿಕಾರಿಗಳು ನೇರವಾಗಿ ನೇಮಕ ಮಾಡಿಕೊಂಡವರೆಷ್ಟು ; (ವಿವರ ನೀಡುವುದು)

(ಉ) ಕನ್ನಡಿಗ ಅಭ್ಯರ್ಥಿಗಳಿಗೆ ಅನ್ಯಾಯ ಮಾಡಿದ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?